**ಕರ್ನಾಟಕ ವಿಧಾನ ಪರಿಷತ್ತು**

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1189 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು | ಶ್ರೀ ಅ. ದೇವೇಗೌಡ |
| ಉತ್ತರಿಸಬೇಕಾದ ದಿನಾಂಕ | 15.12.2023 |
| ಉತ್ತರಿಸುವ ಸಚಿವರು | ಸಮಾಜ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ಹಿಂದುಳಿದ ವರ್ಗಗಳ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ ಮತ್ತು ಸಮಾಜ ಕಲ್ಯಾಣ ಇಲಾಖೆಗಳಡಿ ಬರುವ ಮೊರಾರ್ಜಿ ದೇಸಾಯಿ/ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಗಳು ನಿರ್ವಹಣೆ ಮಾಡಲಾಗುತ್ತಿದ್ದು, 2015 ರಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಡಿ ಬರುತ್ತಿದ್ದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಿಂದ ಹಿಂಪಡೆದು ಸದರಿ ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಹಾಗೂ ಶಿಕ್ಷಕರು ಹಾಗೂ ನೌಕರರಿಗೆ ಸರ್ಕಾರಿ ನೌಕರರಿಗೆ ಸಿಗುವ ಎಲ್ಲಾ ಸೌಲಭ್ಯಗಳನ್ನು ನೀಡುತ್ತಿರುವುದರಿಂದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧೀನದ ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ಮತ್ತು ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗದವರಿಗೆ ಯಾವುದೇ ಸೌಲಭ್ಯಗಳನ್ನು ನೀಡದೆ ತಾರತಮ್ಯ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಧ ಅಧೀನದಲ್ಲಿ ಪರಿಶಿಷ್ಟ ಜಾತಿ- 503, ಪರಿಶಿಷ್ಟ ವರ್ಗ- 156 ಮತ್ತು ಹಿಂದುಳಿದ ವರ್ಗ-174 ಒಟ್ಟಾರೆ 833 ವಸತಿ ಶಾಲೆ/ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ.<br><br>ಸಂಘದ ಅಧೀನದ ವಸತಿ ಶಾಲೆ/ಕಾಲೇಜುಗಳಲ್ಲಿ 6403 ಖಾಯಂ ಬೋಧಕ /ಬೋಧಕೇತರ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದು, ಸದರಿ ಸಿಬ್ಬಂದಿಗಳಿಗೆ ಒದಗಿಸಲಾಗುತ್ತಿರುವ ಸೇವಾ ಸೌಲಭ್ಯಗಳ ವಿವರಗಳು ಈ ಕೆಳಕಂಡಂತಿದೆ.<br><br>**ಡಿ. ಸಿ. ಆರ್. ಜಿ :**<br><br>6ನೇ ವೇತನ ಆಯೋಗದ ಶಿಫಾರಸ್ಸಿನನ್ವಯ ದಿನಾಂಕ: 01-04-2006ರಂದು ಮತ್ತು ನಂತರ ಸರ್ಕಾರಿ ಸೇವೆಗೆ ನೇಮಕ ಹೊಂದಿರುವ ಹೊಸ ವ್ಯಾಖ್ಯಾನಿಸಿದ ಅಂಶದಾಯಿ ಪಿಂಚಣಿ ಕೊಡುಗೆ ಯೋಜನೆಗೆ ಒಳಪಡುವ ಸರ್ಕಾರಿ ನೌಕರರಿಗೆ ಈ ಹಿಂದೆ ಇದ್ದ ಇಡಿಗಂಟಿನ ಪರಿಹಾರ ಸೌಲಭ್ಯವನ್ನು ಹಿಂಪಡೆದು, ಸರ್ಕಾರ ಆದೇಶ ಸಂಖ್ಯೆ:ಆಇ 34 ಪಿಇಎನ್ 2018 ದಿನಾಂಕ: 23.06.2018 ರ ಮೂಲಕ ನಿವೃತ್ತಿ ಮತ್ತು ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯವನ್ನು ಜಾರಿಗೊಳಿಸಲಾಗಿದೆ. ಈ ಆದೇಶವು ನೂತನ ಪಿಂಚಣಿ ಯೋಜನೆಗೆ ಒಳಪಡುವ ಸರ್ಕಾರಿ ನೌಕರರಿಗೆ ಎಂದು ಸ್ಪಷ್ಟವಾಗಿ ತಿಳಿಸಿರುವುದರಿಂದ ಸದರಿ ಸೌಲಭ್ಯವು ಸರ್ಕಾರದ ನಿಗಮ ಮಂಡಳಿಗಳು, ಸ್ವಾಯತ್ತ ಸಂಸ್ಥೆಗಳು ಹಾಗೂ ಸರ್ಕಾರದ ಅಧೀನದ ಇನ್ನಿತರ ಯಾವುದೇ ಸಂಘ ಸಂಸ್ಥೆಗಳ ನೌಕರರಿಗೆ ಅನ್ವಯವಾಗುವುದಿಲ್ಲ.ಆದ್ದರಿಂದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ನೌಕರರಿಗೆ ನಿವೃತ್ತಿ ಮತ್ತು ಮರಣ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯ ವಿಸ್ತರಿಸಲು ಸಾಧ್ಯವಿಲ್ಲವೆಂದು ಆರ್ಥಿಕ ಇಲಾಖೆ ಹಿಂಬರಹ ನೀಡಿರುತ್ತದೆ.<br><br>ಮುಂದುವರೆದು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ನೌಕರರಿಗೆ |
| ಆ) | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧೀನದ ಮೊರಾರ್ಜಿ ದೇಸಾಯಿ ವಸತಿ ಶಾಲೆ ವಿದ್ಯಾರ್ಥಿಗಳಿಗೆ ನೀಡುತ್ತಿರುವ ಮೂಲಭೂತ ಸೌಲಭ್ಯ ಮತ್ತು ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗದವರಿಗೆ ನೀಡುತ್ತಿರುವ ಸರ್ಕಾರಿ ಸೌಲಭ್ಯಗಳನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧೀನದ ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ಮತ್ತು ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗದವರಿಗೂ ವಿಸ್ತರಿಸಲು ಇರುವ ತೊಂದರೆಗಳೇನು; ಈ ತಾರತಮ್ಯವನ್ನು ಹೋಗಲಾಡಿಸಿ ಸಮಾನ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ: | |

Scanned by CamScanner

DCRG ಸೌಲಭ್ಯವನ್ನು ವಿಸ್ತರಿಸುವ ಪ್ರಸ್ತಾವನೆಯು ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿದ್ದು, ಅಂತಿಮ ನಿರ್ಣಯವಾಗುವವರೆಗೆ ಸಂಘದ ಅಧೀನದ ಸೇವಾನಿರತ ಖಾಯಂ ಸಿಬ್ಬಂದಿಗಳು ಆಕಾಲಿಕ ಮರಣ ಹೊಂದಿದ್ದಲ್ಲಿ ಅಂತಹ ಸಿಬ್ಬಂದಿಗಳ ಅವಲಂಬಿತ ಕುಟುಂಬದವರಿಗೆ ರೂ.5.00/- ಲಕ್ಷಗಳ ಪರಿಹಾರ ಧನವನ್ನು ಪಾವತಿಸಲು ಆದೇಶಿಸಲಾಗಿರುತ್ತದೆ.

**ಜ್ಯೋತಿ ಸಂಜೀವಿನಿ :-**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿನ ಅಧೀನದ ವಸತಿ ಶಾಲೆ/ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ವತಿಯಿಂದ ಅನುಷ್ಠಾನಗೊಳಿಸಲು ವಾರ್ಷಿಕವಾಗಿ ಅಂದಾಜು ರೂ.4.55 ಕೋಟಿ ವೆಚ್ಚದಲ್ಲಿ ಭರಿಸುವ ಸಂಬಂಧ ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿದ್ದು, ಸದರಿ ಪ್ರಸ್ತಾವನೆಯು ಪ್ರಸ್ತುತ ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿರುತ್ತದೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವಸತಿ ಶಾಲೆ/ ಕಾಲೇಜುಗಳ ಖಾಯಂ ನೌಕರರುಗಳಿಗೆ ಮತ್ತು ಇವರ ಅವಲಂಬಿತ ಕುಟುಂಬದ ಸದಸ್ಯರುಗಳಿಗೆ ಜ್ಯೋತಿ ಸಂಜೀವಿನಿ ಯೋಜನೆಯನ್ನು ಅನುಷ್ಠಾನಗೊಳಿಸಲು ಸುವರ್ಣ ಆರೋಗ್ಯ ಟ್ರಸ್ಟ್ ರವರಿಗೆ ರೂ.4.5 ಕೋಟಿಗಳನ್ನು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘಕ್ಕೆ ಒದಗಿಸಲಾಗುವ ನಿರ್ವಹಣಾ ವೆಚ್ಚದಿಂದ ಭರಿಸಿ, ಪಾವತಿಸಲು ಆದೇಶಿಸಿದೆ.

**ಶೇ.10 ರಷ್ಟು ಕ್ಯಾಂಪಸ್ ವಿಶೇಷ ಭತ್ಯೆ:-**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆ/ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಖಾಯಂ ಸಿಬ್ಬಂದಿಗಳಿಗೆ ಶೇ 10 ರಷ್ಟು ವಿಶೇಷ ಕ್ಯಾಂಪಸ್ ಭತ್ಯೆಯನ್ನು ಮಂಜೂರು ಮಾಡುವ ಬಗ್ಗೆ ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಆರ್ಥಿಕ ಇಲಾಖೆಯು ವೇತನ ಆಯೋಗ ಅಥವಾ ತಜ್ಞರ ಸಮಿತಿಗಳ ಶಿಫಾರಸ್ಸಿನ ಮೇರೆಗೆ ರಾಜ್ಯ ಸರ್ಕಾರಿ ನೌಕರರಿಗೆ ವಿಶೇಷ ಭತ್ಯೆಯನ್ನು ಮಂಜೂರು ಮಾಡಲಾಗುತ್ತಿದೆ. ರಾಜ್ಯ ಸರ್ಕಾರವು ತನ್ನ ನೌಕರರಿಗೆ ಕೇಂದ್ರ ಸರ್ಕಾರದ ರೀತ್ಯ ವೇತನ ಪರಿಷ್ಕರಣೆ ಮಾಡಿರುವುದಿಲ್ಲ. ಇದೊಂದು ಹೊಸದಾದ ಕ್ಯಾಂಪಸ್ ವಿಶೇಷ ಭತ್ಯೆಯಾಗಿದ್ದು, ಪ್ರಸಕ್ತ 6ನೇ ರಾಜ್ಯ ವೇತನ ಆಯೋಗವು ತನ್ನ ವರದಿಯಲ್ಲಿ ಈ ರೀತಿಯ ಭತ್ಯೆಗೆ ಯಾವುದೇ ಶಿಫಾರಸ್ಸು ಮಾಡಿರುವುದಿಲ್ಲವಾದ್ದರಿಂದ ಈ ಕ್ಯಾಂಪಸ್ ವಿಶೇಷ ಭತ್ಯೆ ಕೋರಿಕೆಯನ್ನು ಒಪ್ಪಲು ಸಾಧ್ಯವಿಲ್ಲವೆಂದು ತಿಳಿಸಿರುತ್ತದೆ. ಆದ್ದರಿಂದ ಖಾಯಂ ಸಿಬ್ಬಂದಿಗಳಿಗೆ ಶೇ.10 ರಷ್ಟು ವಿಶೇಷ ಕ್ಯಾಂಪಸ್

Scanned by CamScanne

| | | |
|---|---|---|
| | | ಭತ್ಯೆಯನ್ನು ಮಂಜೂರು ಮಾಡುವಂತೆ ಕೋರಿ 7ನೇ ವೇತನ ಆಯೋಗಕ್ಕೆ ಪ್ರಸ್ತಾವನ ಸಲ್ಲಿಸಲಾಗಿದೆ.<br><br>ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ಸರ್ಕಾರದಿಂದ ಕಾಲ ಕಾಲಕ್ಕೆ ನಿಗಧಿಪಡಿಸುವ ತುಟ್ಟಿಭತ್ಯೆ, ಮನೆ ಬಾಡಿಗೆ ಭತ್ಯೆ, ಇತ್ಯಾದಿಗಳನ್ನು ಪಾವತಿಸಲಾಗುತ್ತಿದೆ ಮರಣ ಹೊಂದಿದ ಸಿಬ್ಬಂದಿಗಳ ಕುಟುಂಬದ ಅವಲಂಬಿತರಿಗೆ ಅನುಕಂಪದ ಆಧಾರದ ಮೇಲೆ ಉದ್ಯೋಗ ನೀಡಲಾಗುತ್ತಿದೆ ಮತ್ತು ಗಳಿಕೆ ರಜೆ ನಗದೀಕರಣ, ವೈದ್ಯಕೀಯ ವೆಚ್ಚ ಮರು ಪಾವತಿ ಇತ್ಯಾದಿ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. |

ಸಕಇ-ಎಂಡಿಎಸ್/243/2023

(ಡಾ.ಹೆಚ್.ಸಿ. ಮಹದೇವಪ್ಪ )
ಸಮಾಜ ಕಲ್ಯಾಣ ಸಚಿವರು

Scanned by CamScanner